# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2019-20ನೇ ಶೈಕ್ಷಣಿಕ ಸಾಲಿಗಾಗಿ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆ ಸಂಪಾದಿಯಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡುವ ಕುರಿತು.

**ಓದಲಾಗಿದೆ :-**

1. ಸರ್ಕಾರದ ಆದೇಶ ಸಂಖ್ಯೆ : ಇಡಿ 228 ಪಿಬಿಎಸ್ 2018, ದಿನಾಂಕ : 14/06/2018.
2. ನಿರ್ದೇಶಕರು (ಪ್ರೌಢ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ : ಸಿ4(1) ಸ.ಪ್ರೌ.ಶಾ.ಅ.ಶಿ.ನೇಮಕ.02/2019-20, ದಿನಾಂಕ : 17/05/2019.

**ಪ್ರಸ್ತಾವನೆ :-**

ಮೇಲೆ ಕ್ರಮಾಂಕ (1)ರಲ್ಲಿ ಓದಲಾದ ಆದೇಶದಲ್ಲಿ 2018-19ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಪ್ರೌಢಶಾಲಾ ಶಿಕ್ಷಕರುಗಳ ಎದುರಾಗಿ 3100 ಅತಿಥಿ ಶಿಕ್ಷಕರುಗಳನ್ನು ನೇಮಕಾತಿ ಮಾಡಿಕೊಳ್ಳಲು ಮಂಜೂರಾತಿ ನೀಡಲಾಗಿರುತ್ತದೆ.

ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ಪ್ರಸ್ತಾವನೆಯಲ್ಲಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಮತ್ತು ಉತ್ತಮ ಗುಣಮಟ್ಟದ ಶೈಕ್ಷಣಿಕ ಬಲವರ್ಧನೆಯ ಸಲುವಾಗಿ ಬೇಡಿಕೆಗೆ ಅನುಸಾರವಾಗಿ 2019-20ನೇ ಸಾಲಿನಲ್ಲಿ ವಿವಿಧ ಕಾರಣಗಳಿಗಾಗಿ ಖಾಲಿಯಾದ ಸಹ ಶಿಕ್ಷಕರುಗಳ ಹುದ್ದೆಗಳಿಗೆ ಸಂಪಾದಿಯಾಗಿ 3453 ಅತಿಥಿ ಶಿಕ್ಷಕರುಗಳನ್ನು ನೇಮಕಾತಿ ಮಾಡಿಕೊಳ್ಳಲು ಅನುಮತಿ ನೀಡಲು ಪ್ರಸ್ತಾವನೆ ಸಲ್ಲಿಕೆಯಾಗಿರುತ್ತದೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ರಾಜ್ಯದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2019-20ನೇ ಸಾಲಿನಲ್ಲಿ ವಿವಿಧ ಕಾರಣಗಳಿಗಾಗಿ ಖಾಲಿಯಿರುವ ಹುದ್ದೆಗಳ ಸಂಪಾದಿಯಾಗಿ 3453 ಅತಿಥಿ ಶಿಕ್ಷಕರನ್ನು ನೇಮಕ ಮಾಡಲು ಮಂಜೂರಾತಿ ನೀಡಲು ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಇಪಿ 19 ಎಸ್‌ಇಎಸ್ 2019, ಬೆಂಗಳೂರು, ದಿನಾಂಕ : 24/07/2019.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ವಿವಿಧ ಕಾರಣಗಳಿಂದಾಗಿ ಖಾಲಿಯಿರುವ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಗಳ ಸಂಪಾದಿಯಾಗಿ ಅಗತ್ಯಕ್ಕೆ ಅನುಸಾರವಾಗಿ 2019-20ನೇ ಸಾಲಿಗೆ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ 3453 ಹುದ್ದೆಗಳಿಗೆದುರಾಗಿ ಬೆಂಗಳೂರು ವಿಭಾಗಕ್ಕೆ 589, ಮೈಸೂರು ವಿಭಾಗಕ್ಕೆ 775, ಬೆಳಗಾವಿ ವಿಭಾಗಕ್ಕೆ 1017 ಮತ್ತು ಕಲಬುರಗಿ ವಿಭಾಗಕ್ಕೆ 1072 ಒಟ್ಟು 3453 ಅತಿಥಿ ಶಿಕ್ಷಕರುಗಳನ್ನು ನೇಮಕ ಮಾಡಲು ಈ ಕೆಳಕಂಡ ಷರತ್ತು ಹಾಗೂ ನಿಬಂಧನೆಗಳಿಗೆ ಒಳಪಟ್ಟು ಮಂಜೂರಾತಿ ನೀಡಿ ಆದೇಶಿಸಿದೆ. ಮುಂದುವರೆದು, ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ 3453 ಹುದ್ದೆಗಳ ಎದುರಿಗೆ ನೇಮಕ ಮಾಡಿಕೊಳ್ಳುವ ಅತಿಥಿ ಶಿಕ್ಷಕರ ತಾಲ್ಲೂಕುವಾರು ಸಂಖ್ಯೆ/ಅನುದಾನದ ವಿವರಗಳೊಂದಿಗೆ ಅತಿಥಿ ಶಿಕ್ಷಕರ ಗೌರವ ಸಂಭಾವನೆ ಪಾವತಿಸಲು ಅನುದಾನ ಬಿಡುಗಡೆ ಮಾಡುವ ಪ್ರಸ್ತಾವನೆಯನ್ನು ಮರು ಸಲ್ಲಿಸುವಂತೆ ತಿಳಿಸಿದೆ.

**ಷರತ್ತುಗಳು :-**

1. ಸರ್ಕಾರಿ ಪ್ರೌಢ ಶಾಲೆಗಳಲ್ಲಿ ವಿದ್ಯಾರ್ಥಿ ಮತ್ತು ಶಿಕ್ಷಕರ ಅನುಪಾತ ಎಲ್ಲಾ ಜಿಲ್ಲೆಗಳಲ್ಲಿ ಸಮಾನವಾಗಿ ಇಲ್ಲದಿರುವುದರಿಂದ ಮತ್ತು ಕೆಲವು ಜಿಲ್ಲೆಗಳಲ್ಲಿ ಹೆಚ್ಚುವರಿ ಶಿಕ್ಷಕರು ಇರುವುದು ಕಂಡುಬಂದಿರುವುದರಿಂದ ಶಿಕ್ಷಕರನ್ನು ಮರು ಹಂಚಿಕೆ ಮಾಡಲು ತುರ್ತಾಗಿ ಕ್ರಮ ಕೈಗೊಳ್ಳುವುದು;
2. ಶಿಕ್ಷಕರ ನೇಮಕಾತಿ ಹಾಗೂ ಶಾಲಾವಾರು ಹಂಚಿಕೆ ಬಗೆಗಿನ ನೀತಿಗಳನ್ನು ಇಲಾಖೆ ಸುಧಾರಿಸುವ ಕ್ರಮವಾಗಿ ( Rationalite) ಮಾಡುವುದು.
3. ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಹೆಚ್ಚುವರಿ ಶಿಕ್ಷಕರು ಇರುವುದು ಕಂಡು ಬಂದಿದ್ದು, ಅವಶ್ಯಕತೆ ಇರುವ ಕಡೆ ಮರು ಹಂಚಿಕೆ ಮಾಡುವುದು.
4. ಶಿಕ್ಷಕರ ಸಂಪನ್ಮೂಲಗಳನ್ನು ಹೆಚ್ಚು ಅರ್ಥಕವಾಗಿ, ಹೆಚ್ಚು ಪರಿಣಾಮಕಾರಿಯಾಗಿ ಬಳಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.

Scanned by CamScanner

5. ಅನುದಾನಿತ ಶಾಲೆಗಳಲ್ಲಿ ಇರುವ ಹೆಚ್ಚುವರಿ ಶಿಕ್ಷಕರನ್ನು ಕೊರತೆ ಇರುವ ಸರ್ಕಾರಿ ಶಾಲೆಗಳಲ್ಲಿ (O.O.D) ಆಧಾರದ ಮೇಲೆ ಹಂಚಿಕೆ ಮಾಡುವುದು.

6. ಕೊರತೆ ಇರುವ ಶಾಲೆಗಳಿಗೆ ಹೆಚ್ಚುವರಿ ಇರುವ ಶಾಲೆಗಳಿಂದ ಶಿಕ್ಷಕರನ್ನು ಕೂಡಲೇ ಮರು ವಿನ್ಯಾಸಿಸಲು ಕ್ರಮವಹಿಸುವುದು.

7. ಪ್ರೌಢ ಶಾಲೆಗಳಿಗೆ ಸಂಬಂಧಿಸಿದಂತೆ ಅತಿಥಿ ಶಿಕ್ಷಕರ ಆಯ್ಕೆ ಜವಾಬ್ದಾರಿಯನ್ನು ಸಂಬಂಧಿಸಿದ ಸರ್ಕಾರಿ ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯರೇ ಮಾಡುವುದು.

8. ಪ್ರೌಢ ಶಾಲಾ ಅತಿಥಿ ಶಿಕ್ಷಕರನ್ನು ಪ್ರಮುಖವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಮಾತ್ರ ನೇಮಿಸುವುದು.

9. ನೇಮಕಾತಿಗೆ ಅಧಿಸೂಚಿಸಿದ ಪ್ರೌಢ ಶಿಕ್ಷಕರು ನೇಮಕಗೊಂಡು ಕರ್ತವ್ಯಕ್ಕೆ ಹಾಜರಾದ ತಕ್ಷಣ ಅತಿಥಿ ಶಿಕ್ಷಕರ ಹುದ್ದೆಗಳು ತಂತಾನೆ ರದ್ದಾಗುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : ಆಇ 23 ವೆಚ್ಚ-8/2019, ದಿನಾಂಕ : 08/07/2019ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

Rajyashree V T 24/7

(ವಿ. ಟಿ. ರಾಜ್ಯಶ್ರೀ),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರೌಢ ಶಿಕ್ಷಣ).

ಇವರಿಗೆ :-

1. ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ/ಧಾರವಾಡ.
4. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಆಯುಕ್ತರ ಮೂಲಕ)
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ( ವೆಚ್ಚ-7 ಮತ್ತು 8) ವಿಧಾನ ಸೌಧ,ಬೆಂ.
6. ನಿರ್ದೇಶಕರು(ಪ್ರೌಢ ಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರುಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, (ಆಯುಕ್ತರ ಮೂಲಕ).
8. ಶಾಖಾಧಿಕಾರಿ, ಪ್ರೌಢ- ಬಿ ಶಾಖೆ/ ಮಾಹಿತಿ ಕೇಂದ್ರ(ಅಂತರ್ ಜಾಲದಲ್ಲಿ ಪ್ರಕಟಿಸಲು)
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned by CamScanner